ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/33/ಇಎಸ್‌ಟಿ(10)/2012 / 2073

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 03/09/2013.

## ಅ ಧಿ ಸೂ ಚ ನೆ

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ರಸಾಯನಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾಗಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ಎರಡು ವರ್ಷಗಳ ಪರಿವೀಕ್ಷಣಾ ಅವಧಿಯ ಮೇರೆಗೆ ಎ.ಐ.ಸಿ.ಟಿ.ಇ. 6ನೇ ಪರಿಷ್ಕೃತ ವೇತನಶ್ರೇಣಿ ರೂ. 15600-39100 + ಎಜಿಪಿ 6000/- (ಎಐಸಿಟಿಇ 5ನೇ ವೇತನಶ್ರೇಣಿಯಲ್ಲಿ ಉಪನ್ಯಾಸಕರ ಹುದ್ದೆ ವೇತನ ಶ್ರೇಣಿ ರೂ. 8000-13500) ರಲ್ಲಿ ನೇಮಕಾತಿ ಮಾಡಿ, ದಿನಾಂಕ: 03/09/2013 ರಂದು ನಡೆದ ಕೌನ್ಸಿಲಿಂಗ್‌ನಲ್ಲಿ ಆಯ್ಕೆಮಾಡಿಕೊಂಡಂತೆ ಅವರ ಹೆಸರಿನ ಮುಂದೆ ಸೂಚಿಸಿರುವ ಸಂಸ್ಥೆಗೆ ಸ್ಥಳನಿಯುಕ್ತಿಗೊಳಿಸಿ ನೇಮಕಾತಿ ಮಾಡಲಾಗಿದೆ.

| ಕ್ರ ಸಂ. | ಅಭ್ಯರ್ಥಿಯ ಹೆಸರು ಮತ್ತು ವಿಭಾಗ | ಆಯ್ಕೆ ಮಾಡಿಕೊಂಡ ಸಂಸ್ಥೆ |
|---|---|---|
| 1. | Shabana Banu<br>**ASSISTANT PROFFESSOR IN CHEMISTRY** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ. |
| 2. | Thimmegowda N.R.<br>**ASSISTANT PROFFESSOR IN CHEMISTRY** | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ.ಸಂಸ್ಥೆ, ಬೆಂಗಳೂರು. |
| 3. | Chandrappa K.G.<br>**ASSISTANT PROFFESSOR IN CHEMISTRY** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ. |
| 4. | Nagabhushana M M<br>**ASSISTANT PROFFESSOR IN CHEMISTRY** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ. |
| 5. | Madhuri R<br>**ASSISTANT PROFFESSOR IN CHEMISTRY** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ. |
| 6. | Lalitha D<br>**ASSISTANT PROFFESSOR IN CHEMISTRY** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ. |

| | | |
|---|---|---|
| 7. | Suresha M S<br>**ASSISTANT PROFFESSOR IN CHEMISTRY** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ. |
| 8. | Prasad N<br>**ASSISTANT PROFFESSOR IN CHEMISTRY** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ. |

ಅಭ್ಯರ್ಥಿಗಳು ಈ ಆದೇಶದ ದಿನಾಂಕದ 15 ದಿನಗಳೊಳಗಾಗಿ ತಮಗೆ ಸ್ಥಳ ನಿಯುಕ್ತಿಗೊಳಿಸಲಾದ ಸಂಸ್ಥೆಯಲ್ಲಿ ಎಲ್ಲಾ ಮೂಲ ದಾಖಲೆಗಳೊಂದಿಗೆ ಕಾರ್ಯವರದಿ ಮಾಡಿಕೊಳ್ಳತಕ್ಕದ್ದು.

**ಸದರಿ ನೇಮಕಾತಿಯು ಈ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ.**

1. 15 ದಿನಗಳೊಳಗಾಗಿ ಕಾರ್ಯವರದಿ ಮಾಡಿಕೊಳ್ಳದಿದ್ದಲ್ಲಿ ಈ ನೇಮಕಾತಿ ಆದೇಶವು ತಂತಾನೇ ರದ್ದಾಗುತ್ತದೆ.
2. ಈ ನೇಮಕಾತಿಯು ಪರಿವೀಕ್ಷಣಾ ಅವಧಿಯು ಮುಗಿಯುವವರೆಗೆ ತಾತ್ಕಾಲಿಕವಾಗಿದ್ದು, ಆಗಿಂದಾಗ್ಗೆ ವಿಧಿಸುವ ವಿವಿಧ ಸೇವಾ ಷರತ್ತುಗಳಿಗೆ ಒಳಪಟ್ಟಿರುತ್ತದೆ.
3. ಅಭ್ಯರ್ಥಿಗಳು ಕಾರ್ಯವರದಿಯ ಸಮಯದಲ್ಲಿ ತಮ್ಮ ಜನ್ಮ ದಿನಾಂಕ, ವಿದ್ಯಾರ್ಹತೆ, ಗುಣ ನಡತೆ, ಸಿಂಧುತ್ವ ಮತ್ತು ಜಿಲ್ಲಾ ವೈದ್ಯಾಧಿಕಾರಿಗಳಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರದ ಮೂಲ ದಾಖಲೆಗಳನ್ನು ಸಂಬಂಧಪಟ್ಟ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
4. ಕರ್ನಾಟಕ ಸೇವಾ (ಸೇವಾ ಮತ್ತು ಕನ್ನಡ ಭಾಷೆ ಪರೀಕ್ಷೆಗಳು) ನಿಯಮಗಳ (1974)ರ ಅಡಿ ನಿಗದಿಪಡಿಸಿರುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪರಿವೀಕ್ಷಣಾ ಅವಧಿಯಲ್ಲಿ ಉತ್ತೀರ್ಣರಾಗತಕ್ಕದ್ದು.
5. ಇವರ ಸೇವಾ ಜೇಷ್ಠತೆಯು ಪ್ರಸ್ತುತ ಕರ್ನಾಟಕ ಲೋಕಸೇವಾ ಆಯೋಗವು ನೀಡಿರುವ ಆಯ್ಕೆ ಪಟ್ಟಿಯಲ್ಲಿನ ಕ್ರಮ ಸಂಖ್ಯೆಗನುಗುಣವಾಗಿ ಇರತಕ್ಕದ್ದು. ನಂತರ ಕರ್ನಾಟಕ ಲೋಕಸೇವಾ ಆಯೋಗವು ಕ್ರೋಢೀಕೃತ ಜೇಷ್ಠತಾ ಪಟ್ಟಿಯಲ್ಲಿ ನಿಗದಿಪಡಿಸಿದಂತೆ ಸರ್ಕಾರ ಹೊರಡಿಸುವ ಅಧಿಸೂಚನೆಯಂತೆ ಇರುತ್ತದೆ.
6. ಸದರಿಯವರು ದಿನಾಂಕ: 1-4-2006ರ ನಂತರ ಸರ್ಕಾರಿ ಸೇವೆಗೆ ಸೇರಿದ್ದು, ಇವರು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

**ನಿರ್ದೇಶಕರು.**

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು (ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 05 ಪ್ರತಿಗಳನ್ನು ಒದಗಿಸುವಂತೆ ಕೋರುತ್ತಾ)

**ಪ್ರತಿಯನ್ನು:** ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ರವಾನಿಸಲಾಗಿದೆ:-

1. ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ ಲೆಕ್ಕಪರಿಶೋಧನೆ-1 ಮತ್ತು 2), ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಪಾರ್ಕ್‌ಹೌಸ್, ಬೆಂಗಳೂರು
4. ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಖಜಾನಾಧಿಕಾರಿಗಳಿಗೆ.
5. ಸಂಬಂಧಪಟ್ಟ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ : ಅಭ್ಯರ್ಥಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯವರದಿ ಮಾಡುವ ಸಮಯದಲ್ಲಿ ಅವರುಗಳ ಜನ್ಮ ದಿನಾಂಕ, ವಿದ್ಯಾರ್ಹತೆ, ಗುಣ ನಡತೆ, ಸಿಂಧುತ್ವ ಪ್ರಮಾಣ ಪತ್ರ ಮತ್ತು ವೈದ್ಯಕೀಯ ಪ್ರಮಾಣ ಪತ್ರದ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಪರಿಶೀಲಿಸಿ ಎಲ್ಲಾ ದಾಖಲೆಗಳು ಸರಿಯಾಗಿವೆ ಎಂದು ದೃಢಪಟ್ಟಲ್ಲಿ ಮಾತ್ರ ಕಾರ್ಯವರದಿಗೆ ಅನುಮತಿ ನೀಡತಕ್ಕದ್ದು ಮತ್ತು ಅಭ್ಯರ್ಥಿಗಳು ಕಾರ್ಯವರದಿ ಮಾಡಿದ ನಂತರ ಕೂಡಲೇ ನಿರ್ದೇಶನಾಲಯಕ್ಕೆ ವರದಿ ಸಲ್ಲಿಸುವುದು.
6. ಸಂಬಂಧಪಟ್ಟ ಅಭ್ಯರ್ಥಿಗಳಿಗೆ
7. ಕಡತಕ್ಕೆ

8. ಐ- ಅಧ್ಯಾತ ವಿಭಾಗಕ್ಕೆ